**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಾಣೇಶ್ ಎಂ.ಕೆ. ಇವರು ನಿಯಮ 330 ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ವಿಷಯ: ಗ್ರಾಮ ಪಂಚಾಯತಿಯ ನೌಕರರು ಮತ್ತು ಸಿಬ್ಬಂದಿಗಳ ಅಕಾಲಿಕ ಮರಣ ಮತ್ತು ಅವಘಡಗಳು ಸಂಭವಿಸುತ್ತಿದ್ದು, ಸದರಿ ಕಾರಣಗಳಿಗಾಗಿ ಜಿಲ್ಲಾ ಮಟ್ಟದಲ್ಲಿ ನೌಕರರು ಮತ್ತು ಸಿಬ್ಬಂದಿಗಳಿಗೆ ಕಲ್ಯಾಣ ನಿಧಿ ಸ್ಥಾಪಿಸುವ ಬಗ್ಗೆ.**

**ಉತ್ತರ:** ಗ್ರಾಮ ಪಂಚಾಯತಿ ಸೇವೆಯಿಂದ ನಿವೃತ್ತಿಯಾಗುವ ಸಿಬ್ಬಂದಿಗೆ ಅಥವಾ ಸೇವೆಯಲ್ಲಿ ಮರಣ ಹೊಂದಿದ ಸಿಬ್ಬಂದಿಯ ನ್ಯಾಯಬದ್ಧ ಅವಲಂಬಿತರಿಗೆ ಅವರುಗಳು ಸಲ್ಲಿಸಿದ ಸೇವಾ ಅವಧಿಯ ಆಧಾರದ ಮೇಲೆ ಒಂದು ವರ್ಷದ ಸೇವೆಗೆ 15 ದಿನಗಳ ವೇತನದಂತೆ ಸೇವಾ ಅವಧಿಯ ಗರಿಷ್ಠ 15 ತಿಂಗಳ ವೇತನ ಮೀರದಂತೆ ನಿವೃತ್ತಿ ಹಾಗೂ ಮರಣೋತ್ತರ ಉಪದಾನಗಳನ್ನು ನೀಡಲಾಗುತ್ತಿದೆ.

ಗ್ರಾಮ ಪಂಚಾಯತಿ ನೌಕರನು ಸೇವೆಯಲ್ಲಿರುವಾಗಲೇ ಮರಣ ಹೊಂದಿದಲ್ಲಿ ಅವರ ಅವಲಂಬಿತರು ಅನುಕಂಪದ ಆಧಾರದ ಮೇಲೆ ನೇಮಕಾತಿ ಹೊಂದಲು ಅರ್ಹರಿದ್ದಲ್ಲಿ, ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗೆ ಬೇರೆ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳುವುದರ ಬದಲು, ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಅವರ ಅವಲಂಬಿತರನ್ನು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಯನ್ನು ಪಡೆದು ಗ್ರಾಮ ಪಂಚಾಯತಿಗಳು ಅನುಕಂಪದ ಆಧಾರದ ಮೇಲೆ ನೇಮಿಸಲು ಅಗತ್ಯ ಕ್ರಮ ವಹಿಸುವಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಿದೆ.

ಪ್ರಸ್ತುತ ಗ್ರಾಮ ಪಂಚಾಯತಿ ನೌಕರರಿಗೆ ಸಂಬಂಧಿಸಿದಂತೆ The Karnataka Gram Swaraj and Panchayat Raj (Staffing Pattern, Scales of Pay, Method of Recruitment and Conditions of Service of Employees of Grama Panchayat) Rules, 2020 ರ ಕರಡನ್ನು ಸಂಸದೀಯ ವ್ಯವಹಾರಗಳ ಇಲಾಖೆಯು ಪರಿಶೋಧನೆ ಮಾಡಿದ್ದು, ದಿನಾಂಕ:29-02-2020 ರಂದು ಪ್ರಕಟಿಸಲಾಗಿದ್ದು, ಅಂತಿಮವಾಗಿ ನಿಯಮಗಳನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿದ ನಂತರ ಗ್ರಾಮ ಪಂಚಾಯತಿ ನೌಕರರಿಗೆ ಇನ್ನಿತರ ಸೇವಾ ಸೌಲಭ್ಯಗಳು ದೊರೆಯುತ್ತವೆ.

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಸಂಖ್ಯೆ. ಗ್ರಾಅಪ 237 ಗ್ರಾಪಂಅ 2020.